Phone : 2287327 / 2287659 / 2284359 / 2287404 / 2287283 / 2287248
Fax : 0824 - 2287452 / 2287367 / 2287424
E-mail : controller@mangaloreuniversity.ac.in

# ಮಂಗಳೂರು ವಿಶ್ವವಿದ್ಯಾನಿಲಯ
# MANGALORE UNIVERSITY

ಕುಲಸಚಿವರ ಕಛೇರಿ, (ಪರೀಕ್ಷಾಂಗ)
ಮಂಗಳಗಂಗೋತ್ರಿ – ೫೭೪ ೧೯೯.
ಕರ್ನಾಟಕ ರಾಜ್ಯ, ಭಾರತ.

(ACCREDITED BY NAAC WITH "A" GRADE)

Office of the
Registrar(Evaluation)
Mangalagangothri - 574 199.
Karnataka State, India.

ಸಂಖ್ಯೆ: ಮಂ.ವಿ./ಪ.ವಿ./ಸಿಆರ್.04/2019-20/ಇ.2 ದಿನಾಂಕ: 13.08.2020

## ಪರಿಷ್ಕೃತ ಪರೀಕ್ಷಾ ಪ್ರಕಟಣೆ

ವಿಷಯ: ಬ್ಯಾಚುಲರ್ ಆಫ್ ವಿಝುವಲ್ ಆರ್ಟ್ಸ್, ಪದವಿಯ ಪರೀಕ್ಷಾ ಪ್ರಕಟಣೆಯನ್ನು ಪರಿಷ್ಕರಿಸಿದ ಬಗ್ಗೆ.

ಉಲ್ಲೇಖ : 1. ಈ ಕಛೇರಿ ಪರೀಕ್ಷೆ ಪ್ರಕಟಣೆ ಸಮ ಸಂಖ್ಯೆ ದಿನಾಂಕ: 15.02.2020.
2. ಅಧಿಸೂಚನೆ ಸಂಖ್ಯೆ: MU/ACC/UG-Cal/CR – 1/2019-20/A6 ದಿನಾಂಕ: 11.08.2020.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿ, ಉಲ್ಲೇಖ(1)ರ ಪ್ರಕಟಣೆಯಲ್ಲಿ ನಿಗದಿಪಡಿಸಲಾಗಿದ್ದ, 2020ರ ಏಪ್ರಿಲ್/ಮೇ ಬ್ಯಾಚುಲರ್ ಆಫ್ ವಿಝುವಲ್ ಆರ್ಟ್ಸ್ ಪದವಿಯ ಲಿಖಿತ ಪರಿಕ್ಷೆಗಳನ್ನು ಕೋವಿಡ್-19ರ ಹಿನ್ನಲೆಯಲ್ಲಿ ಮುಂದೂಡಲಾಗಿದ್ದು, ಸದರಿ ಪರೀಕ್ಷೆಗಳು ದಿನಾಂಕ 16.09.2020ರಿಂದ ಪ್ರಾರಂಭವಾಗಲಿರುವುದು ಎಂಬುದನ್ನು ಬಿ.ವಿ.ಎ. ಪದವಿಯನ್ನು ಬೋಧಿಸುವ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಹಾಗೂ ಪದವಿ ಪರೀಕ್ಷೆಗಳಿಗೆ ಹಾಜರಾಗುವ ಎಲ್ಲಾ ಅಭ್ಯರ್ಥಿಗಳ ಗಮನಕ್ಕೆ ತರಲು ಈ ಮೂಲಕ ಸೂಚಿಸಲಾಗಿದೆ.

ನಾಲ್ಕನೆಯ ವರ್ಷದ ಆವರ್ತಿತ ಮತ್ತು ಪುನರಾವರ್ತಿತ ಪರೀಕ್ಷೆಗಳಿಗೆ ಹಾಜರಾಗಲಿರುವ ವಿದ್ಯಾರ್ಥಿಗಳಿಗೆ ಮತ್ತು ಈಗಾಗಲೇ ಪದವಿಯನ್ನು ಮುಗಿಸಿ ಹಿಂದಿನ ಹಿಂಬಾಕಿ ಇರುವ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯವಾಗುವಂತೆ ಪ್ರಥಮ, ದ್ವಿತೀಯ, ತೃತೀಯ ಮತ್ತು ಚತುರ್ಥ ವರ್ಷದ ಪುನರಾವರ್ತಿತ ಪರೀಕ್ಷೆಗಳು ದಿನಾಂಕ 16.09.2020ರಿಂದ ಪ್ರಾರಂಭವಾಗಲಿರುವುದು. ಈಗಾಗಲೇ ಪರೀಕ್ಷಾ ಶುಲ್ಕವನ್ನು ಪಾವತಿಸದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಕಾಲೇಜಿನ ಮುಖ್ಯಸ್ಥರಲ್ಲಿ ದಿನಾಂಕ 17.08.2020ರೊಳಗೆ ಪಾವತಿಸಲು ತಿಳಿಸಲಾಗಿದೆ.

ಈ ಬಾರಿ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಾದ ಯಾವುದೇ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕವನ್ನು ಸಮಯಕ್ಕೆ ಸರಿಯಾಗಿ ಪಾವತಿಸಲು ಅಸಾಧ್ಯವಾದಲ್ಲಿ, ಸದರಿ ವಿದ್ಯಾರ್ಥಿಗಳಿಗೂ ಪರೀಕ್ಷೆಗೆ ಅರ್ಜಿ ಸಲ್ಲಿಸಿ ಹಾಜರಾಗಲು ಅವಕಾಶ ಕಲ್ಪಿಸಿಕೊಟ್ಟು, ಅಂಕಪಟ್ಟಿಯನ್ನು ವಿದ್ಯಾರ್ಥಿಗೆ ನೀಡುವ ಮೊದಲು ಎಲ್ಲಾ ಶುಲ್ಕವನ್ನು ಪಡೆದುಕೊಂಡು ವಿಶ್ವವಿದ್ಯಾನಿಲಯದ ನಿಧಿಗೆ ಪಾವತಿಸಿ, ಅಂಕಪಟ್ಟಿಯನ್ನು ವಿದ್ಯಾರ್ಥಿಗೆ ನೀಡುವಂತೆ ಹಾಗೂ ಈ ಬಗ್ಗೆ ವಿಶ್ವವಿದ್ಯಾನಿಲಯಕ್ಕೆ ಮಾಹಿತಿ ನೀಡುವಂತೆ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳನ್ನು ಕೋರಲಾಗಿದೆ.

**ಸೂಚನೆಗಳು:**

1. ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕ ರೂ. 120.00 (ರೂಪಾಯಿ ನೂರ ಇಪ್ಪತ್ತು)ನ್ನು ಕಾಲೇಜು ಮುಖ್ಯಸ್ಥರಲ್ಲಿ ಪಾವತಿಸಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು.
2. ಎಲ್ಲಾ ಅಭ್ಯರ್ಥಿಗಳು ಪರೀಕ್ಷಾ ವಿನಾಯಿತಿ ಪಡೆಯುವ ಅಭ್ಯರ್ಥಿಗಳು ಸೇರಿದಂತೆ ರೂ.230/- ಅಂಕಪಟ್ಟಿ ಶುಲ್ಕ ಮತ್ತು ರೂ. 120/- ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕವನ್ನು ಪಾವತಿಸತಕ್ಕದ್ದು.
3. ಅಭ್ಯರ್ಥಿಗಳು ತಮ್ಮ ಪರೀಕ್ಷಾ ಶುಲ್ಕವನ್ನು ಕಾಲೇಜು ಆಫೀಸಿನಲ್ಲಿ ಪಾವತಿಸಬೇಕು ಮತ್ತು ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಬೇಕು. ಶುಲ್ಕವನ್ನು ಪಾವತಿಸಿದ ಬಗ್ಗೆ ಪಡೆದ ರಶೀದಿಯನ್ನು ಪ್ರತ್ಯೇಕವಾಗಿ ಕಳುಹಿಸಿ ಕೊಡಬೇಕು ಹಾಗೂ ಮೊಬಲಗು, ದಿನಾಂಕ ಮತ್ತು ರಶೀದಿ ಸಂಖ್ಯೆಗಳನ್ನು ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿವರವಾಗಿ ನಮೂದಿಸಬೇಕು.

| ಕ್ರಮ ಸಂಖ್ಯೆ | ಪರೀಕ್ಷೆ | ಸೆಮಿಸ್ಟರ್ / ವರ್ಷ | ಶುಲ್ಕ ದರ |
|---|---|---|---|
| 1. | ಬ್ಯಾಚುಲರ್ ಆಫ್ ವಿಝುವಲ್ ಆರ್ಟ್ಸ್ | ವಾರ್ಷಿಕ ಪೂರ್ಣ ಪರೀಕ್ಷೆ<br>I, II ಮತ್ತು IIIನೇ ವರ್ಷ ಪ್ರಾಯೋಗಿಕ ಪರೀಕ್ಷೆ ಸೇರಿಸಿ<br>ವಿಷಯವೊಂದಕ್ಕೆ<br>IVನೇ ವರ್ಷ ಪ್ರಾಯೋಗಿಕ ಪರೀಕ್ಷೆ ಸೇರಿಸಿ<br>ವಿಷಯವೊಂದಕ್ಕೆ | ರೂ.1,500.00<br>ರೂ. 450.00<br>ರೂ.2,230.00<br>ರೂ. 550.00 |

ಉಳಿದಂತೆ ಎಲ್ಲಾ ಸೂಚನೆಗಳು ಈ ಹಿಂದಿನ ಪರೀಕ್ಷಾ ಪ್ರಕಟಣೆಯಲ್ಲಿ ಇರುವಂತೆ ಅನ್ವಯವಾಗುತ್ತದೆ ಎಂದು ತಿಳಿಸಲಾಗಿದೆ.

3/8/2020

ಕುಲಸಚಿವರು (ಪರೀಕ್ಷಾಂಗ)

ಲಗತ್ತು: * ಪ್ರಥಮ, ದ್ವಿತೀಯ ತೃತೀಯ ಮತ್ತು ಚತುರ್ಥ ವರ್ಷದ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿ.
* ವಿದ್ಯಾರ್ಥಿಗಳ ಸಂಖ್ಯೆಯನ್ನು ಸೂಚಿಸುವ ತಃಖ್ತೆ.

ಇವರಿಗೆ: 1. ಆಳ್ವಾಸ್ ಕಾಲೇಜು, ವಿದ್ಯಾಗಿರಿ, ಮೂಡಬಿದರೆ - 574 227
2. ಮಹಾಲಸ ಕಾಲೇಜ್ ಆಫ್ ವಿಝುವಲ್ ಆರ್ಟ್ಸ್, ಮಂಗಳೂರು - 575 003.

ಪ್ರತಿ:

1. ಕುಲಸಚಿವರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
2. ಹಣಕಾಸು ಅಧಿಕಾರಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
3. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ವಿಶ್ವವಿದ್ಯಾನಿಲಯ ಕಾಲೇಜು ಆವರಣ, ಮಂಗಳೂರು
4. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ, ಡಿ.ಸಿ. ಆಫೀಸಿನ ಬಳಿ, ದ.ಕ., ಮಂಗಳೂರು
5. ವಿಶೇಷಾಧಿಕಾರಿ (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ
6. ಸಹಾಯಕ ಕುಲಸಚಿವರು(ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ
7. ಅಧೀಕ್ಷಕರು ಎಸ್.1, ಎಸ್.2, ಎಸ್.3, ಎಸ್.4, ಎಸ್.6.
8. ಸಿಸ್ಟಂ ಅನಾಲಿಸ್ಟ್, ಕಂಪ್ಯೂಟರ್ ವಿಭಾಗ, ಕುಲಸಚಿವ (ಪರೀಕ್ಷಾಂಗ)ರ ಕಛೇರಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
9. ಇ.30 ಕಾರ್ಯನಿರ್ವಾಹಕರು, ಕುಲಸಚಿವರು(ಪರೀಕ್ಷಾಂಗ) ಕಛೇರಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
10. ಕುಲಪತಿಗಳ ಆಪ್ತ ಕಾರ್ಯದರ್ಶಿ, ಕುಲಸಚಿವರ ಆಪ್ತ ಸಹಾಯಕಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ
11. ಆಪ್ತ ಸಹಾಯಕರು, ಕುಲಸಚಿವರು (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ